**Bangalore**
**Regional News**
**02.04.2025 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**ಮುಖ್ಯಾಂಶಗಳು**

1. ಲೋಕಸಭೆಯಲ್ಲಿ ವಕ್ಫ್ ತಿದ್ದುಪಡಿ ಮಸೂದೆ-೨೦೨೫ ಮಂಡನೆ; ಆಡಳಿತ ಪಕ್ಷಗಳ ನಾಯಕರಿಂದ ಸಮರ್ಥನೆ
2. ಕೇಂದ್ರ ಸಚಿವ ನಿತಿನ್ ಗಡ್ಕರಿ ಭೇಟಿಯಾದ ಮುಖ್ಯಮಂತ್ರಿ ಸಿದ್ದರಾಮಯ್ಯ; ಪ್ರಮುಖ ಹೆದ್ದಾರಿ ಯೋಜನೆಗಳ ಅನುಮೋದನೆಗೆ ಮನವಿ
3. ೪೧೬ ಕೋಟಿ ನಿವ್ವಳ ಲಾಭಗಳಿಸಿದ ಮೈಸೂರು ಸೋಪ್ ಸ್ಯಾಂಡಲ್ ಫ್ಯಾಕ್ಟರಿ
4. ರಾಜ್ಯ ಸರ್ಕಾರದ ಬೆಲೆ ಏರಿಕೆ ನೀತಿಗೆ ವಿರೋಧ; ಬೆಂಗಳೂರಿನಲ್ಲಿ ಇಂದಿನಿಂದ ಬಿಜೆಪಿ ಅಹೋರಾತ್ರಿ ಧರಣಿ
5. ದೆಹಲಿಯಲ್ಲಿ ಕರ್ನಾಟಕ ಭವನ ಲೋಕಾರ್ಪಣೆಗೊಳಿಸಲಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ

<><><><>

ಲೋಕಸಭೆಯಲ್ಲಿಂದು ವಕ್ಫ್ ತಿದ್ದುಪಡಿ ಮಸೂದೆ-೨೦೨೫ ಹಾಗೂ ಮುಸಲ್ಮಾನ್ ವಕ್ಫ್ ಮಸೂದೆ-೨೦೨೪ ರದ್ದುಗೊಳಿಸುವ ಮಸೂದೆಯನ್ನು ಮಂಡಿಸಲಾಗಿದೆ. ಕೇಂದ್ರ ಸಂಸದೀಯ ವ್ಯವಹಾರಗಳು ಮತ್ತು ಅಲ್ಪಸಂಖ್ಯಾತರ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ವಕ್ಫ್ ತಿದ್ದುಪಡಿ ವಿಧೇಯಕ-೨೦೨೫ ಅನ್ನು ಮಂಡಿಸಿದ್ದಾರೆ. ಈ ವೇಳೆ ಮಾತನಾಡಿದ ಅವರು, ಈ ಮಸೂದೆಯಿಂದ ಮುಸ್ಲಿಂಮರ ಧಾರ್ಮಿಕ ಆಚರಣೆಗೆ ಯಾವುದೇ ತೊಂದರೆ ಇಲ್ಲ. ಯಾರ ಆಸ್ತಿಯನ್ನು ಮುಟ್ಟುಗೋಲು ಹಾಕಿಕೊಳ್ಳುವ ಉದ್ದೇಶ ಹೊಂದಿಲ್ಲ ಎಂದು ತಿಳಿಸಿದ್ದಾರೆ.

ಧ್ವನಿ: ಕಿರಣ್ ರಿಜಿಜು

ಈ ಕುರಿತಂತೆ ಲೋಕಸಭೆಯಲ್ಲಿ ಚರ್ಚೆ ಮುಂದುವರೆದಿದ್ದು, ಆಡಳಿತ ಪಕ್ಷದ ಸದಸ್ಯರು ಮಸೂದೆಯನ್ನು ಸಮರ್ಥಿಸಿಕೊಂಡಿದ್ದಾರೆ. ಬೆಲೆ ಏರಿಕೆ, ನಿರುದ್ಯೋಗ, ವೈಫಲ್ಯ ಮರೆ ಮಾಚಲು ಸರ್ಕಾರ ಈ ಮಸೂದೆ ತಂದಿದೆ ಎಂದು ಸಮಾಜವಾದಿ ಪಕ್ಷದ ಮುಖಂಡ ಅಖಿಲೇಶ್ ಯಾದವ್ ಆರೋಪಿಸಿದ್ದಾರೆ. ತೃಣಮೂಲ ಕಾಂಗ್ರೆಸ್, ಆರ್‌ಜೆಡಿ ಸೇರಿದಂತೆ ಹಲವು ಪಕ್ಷಗಳು ವಕ್ಫ್ ತಿದ್ದುಪಡಿ ವಿಧೇಯಕಕ್ಕೆ ಅಸಮಾಧಾನ ವ್ಯಕ್ತಪಡಿಸಿದರು. ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಎನ್‌ಡಿಎ

ಸರ್ಕಾರ ಸಂಸತ್ತಿನಲ್ಲಿ ವಕ್ಫ್ ತಿದ್ದುಪಡಿ ಮಸೂದೆ ಮಂಡಿಸಿರುವುದು ಇದೊಂದು ಐತಿಹಾಸಿಕ ನಿರ್ಣಯವಾಗಿದೆ ಎಂದು ಕೋಲಾರ ಜಿಲ್ಲಾ ಬಿಜೆಪಿ ಅಧ್ಯಕ್ಷ ಓಂಶಕ್ತಿ ಚಲಪತಿ ತಿಳಿಸಿದ್ದಾರೆ.

ಧ್ವನಿ- ಜಿಲ್ಲಾ ಬಿಜೆಪಿ ಅಧ್ಯಕ್ಷ, ಓಂಶಕ್ತಿ ಚಲಪತಿ

<><><><>

ಮುಖ್ಯಮಂತ್ರಿ ಸಿದ್ದರಾಮಯ್ಯ ನವದೆಹಲಿಯಲ್ಲಿಂದು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅವರನ್ನು ಭೇಟಿಯಾಗಿ, ಪ್ರಮುಖ ಹೆದ್ದಾರಿ ಯೋಜನೆಗಳ ಅನುಮೋದನೆಗೆ ಮನವಿ ಪತ್ರ ಸಲ್ಲಿಸಿದರು. ಈ ವೇಳೆ, ರಾಜ್ಯದ ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಗಾಗಿ ಐದು ಸಾವಿರದ ೨೨೫ ಕಿಲೋಮೀಟರ್ ಉದ್ದದ ೩೯ ರಸ್ತೆಗಳನ್ನು ರಾಷ್ಟ್ರೀಯ ಹೆದ್ದಾರಿಯನ್ನಾಗಿಸುವುದರ ಜೊತೆಗೆ ಬಾಕಿ ಇರುವ ಯೋಜನೆಗಳನ್ನು ಮಂಜೂರು ಮಾಡುವಂತೆ ಮನವಿ ಮಾಡಿದರು.  ರಾಷ್ಟ್ರೀಯ ಹೆದ್ದಾರಿ ೨೭೫ ರಲ್ಲಿ ಮೈಸೂರಿನ ಮಣಿಪಾಲ್ ಆಸ್ಪತ್ರೆ ಜಂಕ್ಷನ್‌ನಲ್ಲಿ ಮೇಲ್ಸುತುವೆ ನಿರ್ಮಾಣ, ೩೦ ಕಿಲೋಮೀಟರ್ ಉದ್ದದ ಹುಬ್ಬಳ್ಳಿ-ಧಾರವಾಡದ ಷಟ್ಪಥ ಬೈಪಾಸ್ ನಿರ್ಮಾಣ, ರಾಷ್ಟ್ರೀಯ ಹೆದ್ದಾರಿ ೩೬೯-ಇ ನಲ್ಲಿ ಶರಾವತಿ ಹಿನ್ನೀರಿನ ಮೇಲೆ ಸಿಂಗಧೂರು ಸೇತುವೆ ನಿರ್ಮಾಣ ಸೇರಿದಂತೆ ಸುಮಾರು ೧೨ ಪ್ರಸ್ತಾವನೆಗಳಿಗೆ ಮಂಜೂರಾತಿ ನೀಡುವಂತೆ ಪತ್ರದಲ್ಲಿ ಕೋರಿದ್ದಾರೆ.

<><><><>

ಸರಕಾರಿ ಸ್ವಾಮ್ಯದ ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಯಮಿತವು ೨೦೨೪-೨೫ನೇ ಸಾಲಿನಲ್ಲಿ ೧ ಸಾವಿರದ ೭೮೭ ಕೋಟಿ ರೂಪಾಯಿ ದಾಖಲೆ ವಹಿವಾಟು ನಡೆಸಿ ೪೧೬ ಕೋಟಿ ನಿವ್ವಳ ಲಾಭಗಳಿಸಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ತಿಳಿಸಿದ್ದಾರೆ. ಈ ಕುರಿತಂತೆ ಮಾಹಿತಿ ನೀಡಿರುವ ಸಚಿವರು, ಕಳೆದ ಹಣಕಾಸು ವರ್ಷದಲ್ಲಿ ಸಂಸ್ಥೆಯು ೪೩ ಸಾವಿರದ ೧೪೪ ಮೆಟ್ರಿಕ್ ಟನ್ ಸಾಬೂನು ಮತ್ತು ಮಾರ್ಜಕಗಳನ್ನು ಮಾರಾಟ ಮಾಡಿ, ದಾಖಲೆಯ ಲಾಭ ಗಳಿಸಿದೆ. ಲಾಭದಲ್ಲಿ ನಿಯಮಾನುಸಾರ ಶೇ.೩೦ರಷ್ಟನ್ನು, ಅಂದರೆ ೧೨೩ ಕೋಟಿಯನ್ನು ಸರಕಾರಕ್ಕೆ ಹಸ್ತಾಂತರಿಸಲಾಗುವುದು ಎಂದು ಹೇಳಿದ್ದಾರೆ. ಸಂಸ್ಥೆಯು ಈಗ ಇ-ಕಾಮರ್ಸ್ ಮತ್ತು ಆಧುನಿಕ ವ್ಯಾಪಾರ ಮಾದರಿಗಳನ್ನು ಅಳವಡಿಸಿಕೊಂಡಿದೆ ಎಂದು ಮಾಹಿತಿ ನೀಡಿದ್ದಾರೆ.

<><><><>

ವಿದ್ಯಾರ್ಥಿಗಳ "ಕನಸುಗಳನ್ನು ನನಸಾಗಿಸಲು ಶಿಕ್ಷಣವು ಶ್ರೇಷ್ಠ ಕೊಡುಗೆ ನೀಡಲಿದೆ ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ತಿಳಿಸಿದ್ದಾರೆ. ದಾವಣಗೆರೆ ವಿಶ್ವವಿದ್ಯಾಲಯದ ೧೨ನೇ ಘಟಿಕೋತ್ಸವದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಶಿಕ್ಷಣದ ಮೂಲಕ ಜ್ಞಾನ ಪಡೆದು ಸದೃಢ ರಾಷ್ಟ್ರ ನಿರ್ಮಾಣಕ್ಕೆ ಕೊಡುಗೆ ನೀಡಬೇಕು ಎಂದು ಕರೆ ನೀಡಿದ್ದಾರೆ. 'ಪ್ರಸ್ತುತ ಜಗತ್ತು ವೇಗವಾಗಿ ಬದಲಾಗುತ್ತಿದ್ದು, ಕೃತಕ ಬುದ್ಧಿಮತ್ತೆ, ದತ್ತಾಂಶ ವಿಜ್ಞಾನ, ಸುಸ್ಥಿರ ಅಭಿವೃದ್ಧಿ

ಮತ್ತು ಉದ್ಯಮಶೀಲತೆಯಂತಹ ಕ್ಷೇತ್ರಗಳು ತಮ್ಮ ಜೀವನದ ಮೇಲೆ ಪ್ರಭಾವ ಬೀರುತ್ತಿವೆ ಎಂದು ಅಭಿಪ್ರಾಯಪಟ್ಟಿದ್ದಾರೆ.

<><><><>

ಅಗತ್ಯ ವಸ್ತುಗಳ ಬೆಲೆ ಖಂಡಿಸಿ ಬಿಜೆಪಿ ನಾಯಕರು ಬೆಂಗಳೂರಿನ ಫ್ರೀಡಂ ಪಾರ್ಕ್ ಬಳಿ ಅಹೋರಾತ್ರಿ ಧರಣಿ ಹಮ್ಮಿಕೊಂಡಿದ್ದಾರೆ. ಹಾಲು, ಮೊಸರು, ವಿದ್ಯುತ್, ಬಸ್ ಪ್ರಯಾಣ ದರ, ಬೆಂಗಳೂರಿನಲ್ಲಿ ಕಸದ ತೆರಿಗೆ, ನೋಂದಣಿ ಮತ್ತು ಮುದ್ರಾಂಕ ಶುಲ್ಕ, ಡೀಸೆಲ್ ಸೇರಿದಂತೆ ಎಲ್ಲಾ ವಸ್ತುಗಳ ಬೆಲೆ ಏರಿಕೆಯಾಗಿದೆ. ಇದರಿಂದ ಜನಸಾಮಾನ್ಯರ ದೈನಂದಿನ ಜೀವನಕ್ಕೆ ಕಷ್ಟವಾಗಿದ್ದು, ಕೂಡಲೇ ಸರ್ಕಾರ ಈ ನಿರ್ಧಾರಗಳನ್ನು ಹಿಂಪಡೆಯಬೇಕೆಂದು ಆಗ್ರಹಿಸಿದ್ದಾರೆ. ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ಪ್ರತಿಪಕ್ಷ ನಾಯಕ ಆರ್.ಅಶೋಕ, ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಸೇರಿದಂತೆ ಹಲವು ಮುಖಂಡರು ಪ್ರತಿಭಟನೆಯಲ್ಲಿ ಭಾಗಿಯಾಗಿದ್ದಾರೆ.

<><><><>

ಧಾರವಾಡ-ಬೆಂಗಳೂರು ಮಧ್ಯೆ ಸಂಚರಿಸುವ ವಂದೇ ಭಾರತ್ ರೈಲು ಹಾವೇರಿಯಲ್ಲಿ ನಿಲುಗಡೆಗೆ ರೈಲ್ವೆ ಇಲಾಖೆ ಆದೇಶ ನೀಡಿದೆ ಎಂದು ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ ತಿಳಿಸಿದ್ದಾರೆ. ಇಲಾಖೆಯ ಆದೇಶ ಪ್ರತಿಯನ್ನು ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಹಾಗೂ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಅವರಿಗೆ ಧನ್ಯವಾದ ತಿಳಿಸಿದ್ದಾರೆ.

<><><><>

ದೀನ್ ದಯಾಳ್ ಉಪಾದ್ಯಾಯ ಗ್ರಾಮೀಣ ಕೌಶಲ್ಯ ಯೋಜನೆಯಡಿ ಬೆಂಗಳೂರು ನಗರ ಜಿಲ್ಲಾ ಪಂಚಾಯಿತಿ, ಬೆಂಗಳೂರು ದಕ್ಷಿಣ ತಾಲ್ಲೂಕು ಪಂಚಾಯಿತಿ ವತಿಯಿಂದ ಇದೇ ೫ ರಂದು "ಉದ್ಯೋಗಮೇಳ-೨೦೨೫" ಆಯೋಜಿಸಲಾಗಿದೆ. 'ರಾಜರಾಜೇಶ್ವರಿ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಉದ್ಯೋಗ ಮೇಳ ನಡೆಯಲಿದೆ. ಎಸ್.ಎಸ್.ಎಲ್.ಸಿ, ಪಿಯುಸಿ, ಐ.ಟಿ.ಐ, ಡಿಪ್ಲೊಮಾ ಪದವಿಧರರು, ಪದವೀಧರರು ಮತ್ತು ಸ್ನಾತಕೋತ್ತರ ಪದವಿ ಹೊಂದಿರುವ ೧೮ ವರ್ಷ ಮೇಲ್ಪಟ್ಟ ಅಭ್ಯರ್ಥಿಗಳು ಈ ಮೇಳದಲ್ಲಿ ಭಾಗವಹಿಸಬಹುದು ಎಂದು ಬೆಂಗಳೂರು ನಗರ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><><><>

ರಾಜ್ಯದಲ್ಲಿ ಅಪರಾಧ ಹಾಗೂ ಮಾದಕ ದ್ರವ್ಯ ಚಟುವಟಿಕೆಯನ್ನು ಸಂಪೂರ್ಣವಾಗಿ ಮಟ್ಟ ಹಾಕುವುದು ಸೇರಿದಂತೆ ಮಹಿಳೆಯರ ಸುರಕ್ಷತೆಗೆ ಮತ್ತಷ್ಟು ಹೆಚ್ಚಿನ ಒತ್ತು ನೀಡಬೇಕು ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ತಿಳಿಸಿದ್ದಾರೆ. ಬೆಂಗಳೂರಿನ ಕೆಎಸ್ಆರ್‌ಪಿ ಪೆರೇಡ್ ಮೈದಾನದಲ್ಲಿ ನಡೆದ ಪೊಲೀಸ್ ಧ್ವಜ ದಿನಾಚರಣೆ ಹಾಗೂ ಮುಖ್ಯಮಂತ್ರಿಯವರ ಪದಕ ಪ್ರದಾನ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಅವರು, ದೇಶದಲ್ಲಿ ಸೈಬರ್ ಕ್ರೈಂ ಅತಿದೊಡ್ಡ ಸವಾಲಾಗಿದೆ ಎಂದು

ಹೇಳಿದ್ದಾರೆ. ಸಮಾಜದ ನೆಮ್ಮದಿ ಕಾಪಾಡಿ, ಅಪರಾಧ ಮುಕ್ತ ಸಮಾಜ ನಿರ್ಮಿಸುವಲ್ಲಿ ಪೊಲೀಸರ ಪಾತ್ರ ಮುಖ್ಯವಾಗಿದೆ ಎಂದು ನಿವೃತ್ತ ಪಿ.ಎಸ್.ಐ ವೆಂಕಣ್ಣ ಶಹಾಪುರಕರ್ ಯಾದಗಿರಿಯಲ್ಲಿ ತಿಳಿಸಿದ್ದಾರೆ. ಪೊಲೀಸ್ ಸಿಬ್ಬಂದಿಯ ವಿವಿಧ ಕಲ್ಯಾಣ ಕಾರ್ಯಕ್ರಮಗಳಿಗಾಗಿ ಧ್ವಜ ವಿತರಣೆ ಮಾಡಿ ಹಣ ಸಂಗ್ರಹಿಸುವ ಉದ್ದೇಶದಿಂದ ಪೊಲೀಸ್ ಧ್ವಜ ದಿನಾಚರಣೆಯನ್ನು ಆಚರಿಸಲಾಗುತ್ತಿದೆ ಎಂದು ವಿಜಯನಗರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ ಎಲ್ ಶ್ರೀಹರಿ ಬಾಬು ಹೇಳಿದ್ದಾರೆ. ಪೊಲೀಸರು ಮತ್ತಷ್ಟು ಉತ್ತಮವಾಗಿ ಮತ್ತು ಪರಿಣಾಮಕಾರಿಯಾಗಿ ಕೆಲಸ ಮಾಡಲು ಪೊಲೀಸ್ ಧ್ವಜ ದಿನ ಸಹಕಾರಿಯಾಗಿದೆ ಎಂದು ಚಿಕ್ಕಬಳ್ಳಾಪುರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಶಲ್ ಚೌಕ್ಸೆ ತಿಳಿಸಿದ್ದಾರೆ. ಈ ವಿಶೇಷ ದಿನದಂದು ಪೊಲೀಸ್ ಇಲಾಖೆಯಲ್ಲಿ ಸೇವೆ ಸಲ್ಲಿಸಿ ನಿವೃತ್ತಿಯಾದವರನ್ನು ನೆನೆದು ಕಲ್ಯಾಣ ಕಾರ್ಯಕ್ರಮ ನಡೆಸಲಾಗುತ್ತದೆ ಎಂದು ಕೋಲಾರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ನಿಖಿಲ್ ತಿಳಿಸಿದ್ದಾರೆ. ಕೊಡಗು ಜಿಲ್ಲಾ ಪೊಲೀಸ್ ಘಟಕ ವತಿಯಿಂದಲೂ ಪೊಲೀಸ್ ಧ್ವಜ ದಿನಾಚರಣೆ ಆಚರಿಸಲಾಯಿತು.

<><><><>

ರಾಜ್ಯದ ವಿವಿಧೆಡೆ ಇಂದು ವಚನಕಾರ ದೇವರ ದಾಸಿಮಯ್ಯ ಜಯಂತಿ ಆಚರಿಸಲಾಯಿತು. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ದೇವರ ದಾಸಿಮಯ್ಯ ಅವರ ಭಾವಚಿತ್ರಕ್ಕೆ ನಮನ ಸಲ್ಲಿಸಿದ ಶಾಸಕ ಧೀರಜ್ ಮುನಿರಾಜು, ದಾಸಿಮಯ್ಯನವರು ಬದುಕಿನ ಆದರ್ಶಗಳನ್ನು ವಚನಸಾಹಿತ್ಯದ ಮೂಲಕ ಪ್ರಸ್ತುತ ಪಡಿಸಿದ್ದರು ಎಂದು ತಿಳಿಸಿದರು. ಜನರ ಆಡುನುಡಿಯಾದ ಕನ್ನಡ ಭಾಷೆಯಲ್ಲಿ ವಚನಗಳನ್ನು ರಚಿಸುವ ಮೂಲಕ ದೇವರ ದಾಸಿಮಯ್ಯ ವಚನ ಸಾಹಿತ್ಯ ರಚನೆಗೆ ಮುನ್ನುಡಿ ಹಾಕಿಕೊಟ್ಟರು ಎಂದು ಚಿತ್ರದುರ್ಗ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>